ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಶಿವಮೊಗ್ಗ ನಗರದಲ್ಲಿ ಪೊಲೀಸರು ರಸ್ತೆಯಲ್ಲಿ ವಾಹನಗಳನ್ನು ತಡೆದು ತಪಾಸಣೆ ನಡೆಸುತ್ತಿರುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

389 (452) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಶಿವಮೊಗ್ಗ ನಗರದಲ್ಲಿ ಪೊಲೀಸರು ರಸ್ತೆಯಲ್ಲಿ ವಾಹನಗಳನ್ನು ತಡೆದು ದಾಖಲೆಗಳ ತಪಾಸಣೆ ಮಾಡಬಾರದೆಂದು, ಸಂಚಾರ ನಿಯಮ ಉಲ್ಲಂಘನೆ ಮಾಡಿದ ಸಮಯದಲ್ಲಿ ಮಾತ್ರ ತಪಾಸಣೆ ಮಾಡಬೇಕೆಂದು ಪೊಲೀಸ್ ಆಯುಕ್ತರು ಸುತ್ತೋಲೆ ಹೊರಡಿಸಿದ್ದರೂ (ಸುತ್ತೋಲೆಯ ಪ್ರತಿಯನ್ನು ಒದಗಿಸುವುದು) ಪೊಲೀಸರು ವಾಹನಗಳನ್ನು ನಿಲ್ಲಿಸಿ ದಾಖಲೆಗಳ ತಪಾಸಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ?